# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002

**ಪತ್ರಿಕಾ ಪ್ರಕಟಣೆ** ದಿನಾಂಕ:26.06.2020

**ಪೂಜ್ಯ ಮಹಾಪೌರರು ಹಾಗೂ ಮಾನ್ಯ ಆಯುಕ್ತರು ರವರಿಂದ ಕೆಂಗೇರಿ ಬಳಿ ವೃಷಭಾವತಿ ನದಿ ತಡೆಗೋಡೆ ಕುಸಿದಿರುವ ಸ್ಥಳಕ್ಕೆ ಭೇಟಿ ನೀಡಿರುವ ಬಗ್ಗೆ:**



ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಿನ್ನೆ ಬಿದ್ದ ಭಾರೀ ಮಳೆಯಿಂದಾಗಿ ಮೈಸೂರು ರಸ್ತೆ ಕೆಂಗೇರಿ ಬಳಿ ವೃಷಭಾವತಿ ಕಾಲುವೆಯಲ್ಲಿ ನೀರಿನ ಹರಿವು ಹೆಚ್ಚಾದ ಪರಿಣಾಮ ತಡೆಗೋಡೆ ಕುಸಿದ್ದಿದ್ದು, ಇಂದು ಸ್ಥಳಕ್ಕೆ ಪೂಜ್ಯ ಮಹಾಪೌರರು ರವರು ಭೇಟಿ ನೀಡಿ ತಪಾಸಣೆ ನಡೆಸಿದರು. ಈ ವೇಳೆ ಮಾನ್ಯ ಸ್ಥಳೀಯ ಪಾಲಿಕೆ ಸದಸ್ಯರು ಶ್ರೀ ವಿ.ವಿ.ಸತ್ಯನಾರಾಯಣ, ಮಾನ್ಯ ಆಯುಕ್ತರು ಶ್ರೀ ಬಿ.ಹೆಚ್.ಅನಿಲ್ ಕುಮಾರ್, ಬೃಹತ್ ನೀರುಕಾಲುವೆ ಗಾಲುವೆ ವಿಭಾಗದ ಮುಖ್ಯ ಅಭಿಯಂತರರು ಶ್ರೀ ಬಸವರಾಜ್ ಕಬಾಡೆ, ಆರ್.ಆರ್.ನಗರ ವಲಯ ಮುಖ್ಯ ಅಭಿಯಂತರರು ಶ್ರೀ ವಿಜಯ್ ಕುಮಾರ್ ಹಾಗೂ ಇತರೆ ಸಂಬಂಧಪಟ್ಟ ಅಧಿಕಾರಿಗಳು ಉಪಸ್ಥಿತರಿದ್ದರು.

ಸಿಟಿ ಮುನ್ಸಿಫಲ್ ಕಾರ್ಪೊರೇಷನ್(ಸಿಎಂಸಿ) ಇದ್ದ ವೇಳೆ ತಡೆಗೋಡೆ(ರಿಟೈನಿಂಗ್ ವಾಲ್) ನಿರ್ಮಿಸಲಾಗಿದ್ದು, ಆ ಬಳಿಕ ರಾಷ್ಟ್ರೀಯ ಹೆದ್ದಾರಿ(ನ್ಯಾಷನಲ್ ಹೈವೆ)ಯವರು ರಸ್ತೆ ಕಾಮಗಾರಿ ಮಾಡುವ ವೇಳೆ ಹಳೆ ತಡೆಗೋಡೆಯ ಮೇಲೆಯೆ ಹೊಸದಾಗಿ ರಕ್ಷಣಾ ತಡೆಗೋಡೆ ನಿರ್ಮಾಣ ಮಾಡಲಾಗಿದೆ. ಈ ಸಂಬಂಧ ನಿನ್ನೆ ಸುರಿದ ಧಾರಾಕಾರ ಮಳೆಯಿಂದಾಗಿ ತಡೆಗೋಡೆ ಕುಸಿದಿದ್ದು, ತುರ್ತಾಗಿ ಕಾಮಗಾರಿ ಪ್ರಾರಂಭಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಮಹಾಪೌರರು ರವರು ತಿಳಿಸಿದರು.

ತಪಾಸಣೆ ನಡೆಸಿದ ಬಳಿಕ ಮಾತನಾಡಿದ ಮಹಾಪೌರರು, ಸಿಎಂಸಿ ಇದ್ದ ವೇಳೆ ಅದಂರೆ 20 ವರ್ಷದ ಹಿಂದೆ ತಡೆಗೋಡೆಯನ್ನು ನಿರ್ಮಿಸಲಾಗಿದೆ. ತಡೆಗೋಡೆ ಕುಸಿದಿರುವ ಪರಿಣಾಮ ರಸ್ತೆ ಮಾರ್ಗದ ಸ್ವಲ್ಪ ಭಾಗ ಹಾಳಾಗಿದ್ದು, ವಾಹನಗಳ ಓಡಾಟವನ್ನು ಆ ಮಾರ್ಗದಲ್ಲಿ ತಾತ್ಕಾಲಿಕವಾಗಿ ನಿರ್ಬಂಧಿಸಿ ಪರ್ಯಾಯ ವ್ಯವಸ್ಥೆ ಕಲ್ಪಿಸಲಾಗಿದೆ. ರಸ್ತೆ ಕುಸಿಯದಂತೆ ಮರಳು ಮೂಟೆಗಳನ್ನು ಅಳವಡಿಸಲಾಗುತ್ತಿದ್ದು, ಮತ್ತೆ ಮಳೆಯಾದರೆ ರಸ್ತೆ ಕೊರೆಯದಂತೆ ಮುಂಜಾಗ್ರತೆ ವಹಿಸಲು ಹಾಗೂ ನೀರಿನ ಹರಿವು ಮಾರ್ಗ ಬದಲಾಯಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

**ತದನಂತರ ಆಯುಕ್ತರು ರವರು ಮಾತನಾಡಿ,** ನಗರದಲ್ಲಿ ನಿನ್ನೆ ಬಿದ್ದ ಜೋರು ಮಳೆಯ ಪರಿಣಾಮ ವೃಷಭಾವತಿ ನದಿಯಲ್ಲಿ ನೀರಿನ ಹರಿವು ಜಾಸ್ತಿಯಾಗಿದ್ದರಿಂದ ಹಾಗೂ ರಸ್ತೆ ಮೇಲೆ 3 ರಿಂದ 4 ಅಡಿ ನಿಂತ ನೀರಿನ ಒತ್ತಡಕ್ಕೆ ತಡೆಗೋಡೆ ಕುಸಿದಿದೆ. ಈ ಸಂಬಂಧ ಕೂಡಲೆ ನೀರಿನ ಡೈವರ್ಷನ್‌ಗೆ ತಾತ್ಕಾಲಿಕ ಬಂಡ್ ಹಾಕಿ ನೀರು ಹೆಚ್ಚಾದರೂ ಸಮಸ್ಯೆ ಆಗದಂತೆ ಕ್ರಮ ವಹಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ತಡೆಗೋಡೆ ಕುಸಿದಿರುವ ಬಗ್ಗೆ ಪಾಲಿಕೆ ಅಧಿಕಾರಿಗಳು, ನ್ಯಾಷನಲ್ ಹೈವೆ ಹಾಗೂ ಮೆಟ್ರೋ ಅಧಿಕಾರಿಗಳ ಜೊತೆ ಕೂಡಲೆ ಸಭೆ ನಡೆಸಿ ಸೂಕ್ತ ಪರಿಹಾರ ಕಂಡುಕೊಳ್ಳಲಾಗುವುದು. ತಡೆಗೋಡೆ ಕುಸಿದಿರುವ ರಸ್ತೆ ಮಾರ್ಗದಲ್ಲಿ ವಾಹನಗಳ ಸಂಚಾರವನ್ನು ತಾತ್ಕಾಲಿನ ನಿರ್ಬಂಧಿಸಲಾಗಿದೆ ಎಂದು ತಿಳಿಸಿದರು.

**ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**